ವರದಿಗಳನ್ನೊಪ್ಪಿಸುವುದು

ಶ್ರೀ ಲಕ್ಷ್ಮೀನರಸಿಂಹಯ್ಯ (ಉಪಾಧ್ಯಕ್ಷರು).—ಮಾನ್ಯ ಅಧ್ಯಕ್ಷರೇ, ನಾನು ಪಾಸಗಿ ಸದಸ್ಯರ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಮೂರನೆಯ ವರದಿಯನ್ನು ಒಪ್ಪಿಸುತ್ತೇನೆ.

ಶ್ರೀ ಬಿ. ನಾರಾಯಣಸ್ವಾಮಿ.—ಇದನ್ನು ಸಭೆ ಒಪ್ಪಬೇಕೆಂದು ನಾನು ಸೂಚಿಸುತ್ತೇನೆ.

ಅಧ್ಯಕ್ಷರು.—ವರದಿಯನ್ನೊಪ್ಪಿಸಲಾಯಿತು. ಸಭೆಯು ಈ ವರದಿಯನ್ನು ಒಪ್ಪುವುದೆಂದು ಭಾವಿಸುತ್ತೇನೆ.

ಶ್ರೀ ಬಿ. ಧರ್ಮಪ್ಪ (ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಯ ಅಧ್ಯಕ್ಷರು).—ಮಾನ್ಯ ಅಧ್ಯಕ್ಷರೇ, ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಯು ಹಿಂದಿನ ವರದಿಗಳಲ್ಲಿ ಮಾಡಿದ್ದ ಶಿಫಾರಸ್ಸುಗಳ ಮೇಲೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಸಮಿತಿಯ ಮೂರನೆಯ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ

ಅಧ್ಯಕ್ಷರು.—ವರದಿಯನ್ನೊಪ್ಪಿಸಲಾಯಿತು.

ಶ್ರೀ ಬಿ. ಎಂ. ಇದಿನಬ್ಬ —ಮಾನ್ಯ ಅಧ್ಯಕ್ಷರೇ, ಡಾ|| ಬಿ. ಎಂ. ತಿಪ್ಪೇಸ್ವಾಮಿ. ಅಧ್ಯಕ್ಷರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಮಿತಿಯ ಅಧ್ಯಕ್ಷರು, ಅವರ ಪರವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಮಿತಿಯು ರಾಜ್ಯದ ಸರ್ಕಾರಿ ವಲಯದ ಉದ್ಯಮ/ನಿಗಮ/ಮಂಡಳಿ ಮತ್ತು ಇತರ ಸ್ವಾಯತ್ತ ಸಂಸ್ಥೆಗಳಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಉದ್ಯೋಗ ಹಾಗೂ ಸೇವಾ ನೇಮಕಾತಿಗಳಲ್ಲಿನ ವಿೂಸಲಾತಿ ಕುರಿತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಕಲ್ಯಾಣ ಸಮಿತಿಯ ಮೂರನೆಯ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು.—ವರದಿಯನ್ನು ಒಪ್ಪಿಸಲಾಯಿತು.

ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎಂ ಎಸ್. ಪಾಟೀಲ್.—ಮಾನ್ಯ ಅಧ್ಯಕ್ಷರೇ, ಶ್ರೀ ಕೆ. ಕುಶಾಲ ಅವರ ಪರವಾಗಿ ಈ ಕೆಳಕಂಡ ಅರ್ಜಿಗಳನ್ನು ಸಭೆಯ ಮುಂದೆ ಒಪ್ಪಿಸುತ್ತಿದ್ದೇನೆ.

(ಅ) ದಕ್ಷಿಣ ಕನ್ನಡ ಜಿಲ್ಲೆ ಸುಳ್ಯ ತಾಲ್ಲೂಕಿನ, ಸುಳ್ಯಕ್ಕೆ ಕೈಗಾರಿಕಾ ಅಭಿವೃದ್ಧಿ ಕೇಂದ್ರವನ್ನು ಒದಗಿಸುವ ಬಗ್ಗೆ

(ಆ) ದಕ್ಷಿಣ ಕನ್ನಡ ಜಿಲ್ಲೆ, ಸುಳ್ಯ ತಾಲ್ಲೂಕಿನ ಸುಳ್ಯದಲ್ಲಿ ಸರ್ಕಾರಿ ಕ್ರೀಡಾಂಗಣ ನಿರ್ಮಿಸುವ ಬಗ್ಗೆ

(ಇ) ದಕ್ಷಿಣ ಕನ್ನಡ ಜಿಲ್ಲೆ, ಸುಳ್ಯ ತಾಲ್ಲೂಕಿನ ಬೆಳ್ಳಾರೆಗೆ ಬೈಪಾಸ್ ರಸ್ತೆ ನಿರ್ಮಿಸುವ ಬಗ್ಗೆ

(ಈ) ದಕ್ಷಿಣ ಕನ್ನಡ ಜಿಲ್ಲೆ ಸುಳ್ಯ ತಾಲ್ಲೂಕಿನ ಅಲೆಟ್ಟಿ ಗ್ರಾಮದ ಅರಂಬೂರು ಎಂಬಲ್ಲಿ ಪಯಸ್ವಿನಿ ನದಿಗೆ ಸೇತುವೆ ನಿರ್ಮಿಸುವ ಬಗ್ಗೆ

(ಉ) ದಕ್ಷಿಣ ಕನ್ನಡ ಜಿಲ್ಲೆ ಸುಳ್ಯ ತಾಲ್ಲೂಕಿನ ಸುಳ್ಯದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಹಾಗೂ ಡಿಪೋ ತೆರೆಯುವ ಕುರಿತು ಹಾಗೂ

(ಊ) ದಕ್ಷಿಣ ಕನ್ನಡ ಜಿಲ್ಲೆ ಸುಳ್ಯ ತಾಲ್ಲೂಗಿನ ಬೆಳ್ಳಾರೆಯ ಗೌರಿಹೊಳೆ ಸೇತುವೆಯನ್ನು ವಿಸ್ತರಿಸುವ ಬಗ್ಗೆ

ಶ್ರೀ ಬಸವರಾಜ್ —ಮಾನ್ಯ ಅಧ್ಯಕ್ಷರೇ, ದಕ್ಷಿಣ ಕನ್ನಡ ಜಿಲ್ಲೆ ಉಡುಪಿ ತಾಲ್ಲೂಕಿನ ಕುಕ್ಕೇಹಳ್ಳಿ ಆಂಜಾರು ಗ್ರಾಮಗಳ ನಡುವೆ ಹರಿಯುವ ಸುವರ್ಣ ನದಿಗೆ ಕಾಲುಸಂಕ ನಿರ್ಮಿಸುವ ಬಗ್ಗೆ ಅರ್ಜಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು.—ಅರ್ಜಿಗಳನ್ನು ಒಪ್ಪಿಸಲಾಯಿತು.